## ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರ ನಡವಳಿಗಳು

**ವಿಷಯ:** ಮಾನ್ಯ ಮುಖ್ಯಮಂತ್ರಿಗಳ ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆಯಡಿ ಒದಗಿಸಲಾದ ಅನುದಾನದಲ್ಲಿ ರೂ. 25 ಕೋಟಿ ವಕ್ಫ್ ಆಸ್ತಿಗಳ ಸಂರಕ್ಷಣೆಗಾಗಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಉಲ್ಲೇಖ:**
1) ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯುಡಿ 159 ಎಂಡಿಎಸ್ 2015 ದಿನಾಂಕ: 22.09.2015.
2) ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯುಡಿ 124 ಎಂಡಿಎಸ್ 2016 ದಿನಾಂಕ: 16.04.2016.
3) ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯುಡಿ 124 ಎಂಡಿಎಸ್ 2016 ದಿನಾಂಕ: 21.11.2016.
4) ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯುಡಿ 438 ಎಂಡಿಎಸ್ 2016 ದಿನಾಂಕ: 29.12.2016.

>>>()<<<

**ಪ್ರಸ್ತಾವನೆ:-**

ಉಲ್ಲೇಖ (1)ರ ಸರ್ಕಾರದ ಆದೇಶದಲ್ಲಿ ಮಾನ್ಯ ಮುಖ್ಯಮಂತ್ರಿಗಳ ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆಯಡಿ ವಿವಿಧ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ. ಉಲ್ಲೇಖ (2)ರ ಸರ್ಕಾರದ ಆದೇಶದಲ್ಲಿ 2015-16ನೇ ಸಾಲಿನಲ್ಲಿ ಚಾಲ್ತಿಯಲ್ಲಿದ್ದ ಯೋಜನಾ ಕಾರ್ಯಕ್ರಮಗಳನ್ನು 2016-17ನೇ ಸಾಲಿನವರೆಗೆ ಮುಂದುವರೆಸಿ ಆದೇಶ ಹೊರಡಿಸಲಾಗಿದೆ. (3)ರ ಸರ್ಕಾರದ ಆದೇಶದಲ್ಲಿ ಪ್ರಸಕ್ತ ಸಾಲಿನಲ್ಲಿ ಸದರಿ ಯೋಜನೆಗೆ ಒದಗಿಸಲಾದ ಆಯವ್ಯಯದಲ್ಲಿ ಮೂರನೇ ತ್ರೈಮಾಸಿಕ ಕಂತಿನ ಅನುದಾನ ಬಿಡುಗಡೆ ಮಾಡಲಾಗಿದೆ.

ಉಲ್ಲೇಖ(4)ರ ಸರ್ಕಾರದ ಆದೇಶದಲ್ಲಿ ಮಾನ್ಯ ಮುಖ್ಯಮಂತ್ರಿ ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆಯಡಿ 2016-17ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ 4225-03-277-2-10 (386)ರಡಿ ಒದಗಿಸಲಾಗಿರುವ ರೂ. 100 ಕೋಟಿಗಳ ಅನುದಾನದಲ್ಲಿ ಕ್ರ.ಸಂ (1) ರಿಂದ (9)ರ ವರೆಗಿನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಸೂಚಿಸಿರುವ ಅನುದಾನವನ್ನು ಮೀಸಲಿರಿಸಿ ಅನುಷ್ಠಾನಗೊಳಿಸಲು ಕ್ರಿಯಾ ಯೋಜನೆಗೆ ಅನುಮೋದನೆ ನೀಡಿ ಆದೇಶಿಸಿದೆ.

ಸರ್ಕಾರಿ ಆದೇಶದ ಕ್ರ.ಸಂ (9)ರಲ್ಲಿ ವಕ್ಫ್ ಆಸ್ತಿಗಳ ಸಂರಕ್ಷಣೆಗೆ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಗೆ ರೂ. 25 ಕೋಟಿ ಬಿಡುಗಡೆ ಮಾಡಲು ಆದೇಶಿಸಲಾಗಿದೆ. ಪ್ರಯುಕ್ತ, ಮಾನ್ಯ ಮುಖ್ಯಮಂತ್ರಿ ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆಯಡಿ ಬಿಡುಗಡೆಯಾದ ಅನುದಾನದಲ್ಲಿ ರೂ. 25 ಕೋಟಿ (ರೂ. ಇಪ್ಪತ್ತೈದು ಕೋಟಿಗಳು ಮಾತ್ರ)ಗಳನ್ನು ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ರವರಿಗೆ ಬಿಡುಗಡೆ ಮಾಡಲು ನಿರ್ಧರಿಸಿದ್ದು ಅದರಂತೆ ಈ ಆದೇಶ.

### ಆದೇಶ

**ಸಂಖ್ಯೆ: ಅಸಂನಿ/ಮಾ.ಮು.ಅ.ಯೋ./ವಕ್ಫ್ ಮಂ/ಸಿಆರ್- 152/2016-17** 910 **ದಿನಾಂಕ: 12.01.2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನಾಧರಿಸಿ ಉಲ್ಲೇಖ(4)ರ ಸರ್ಕಾರದ ಆದೇಶದಲ್ಲಿ ಮಾನ್ಯ ಮುಖ್ಯಮಂತ್ರಿ ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆಯಡಿ 2016-17ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ 4225-03-277-2-10 (386)ರಡಿ ಒದಗಿಸಲಾಗಿರುವ ರೂ. 100 ಕೋಟಿಗಳ ಅನುದಾನದಲ್ಲಿ ಕ್ರ.ಸಂ 1 ರಿಂದ 9ರ ವರೆಗಿನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಸೂಚಿಸಿರುವ ಅನುದಾನವನ್ನು ಮೀಸಲಿರಿಸಿ ಅನುಷ್ಠಾನಗೊಳಿಸಲು ಕ್ರಿಯಾ ಯೋಜನೆಗೆ ಅನುಮೋದನೆ ನೀಡಿ ಆದೇಶಿಸಿದೆ.

ರವಾನಿಸಿದೆ.
ದಿನಾಂಕ 12/1/17

ಸರ್ಕಾರಿ ಆದೇಶದ ಕ್ರ.ಸಂ (9)ರಲ್ಲಿ ವಕ್ಫ್ ಆಸ್ತಿಗಳ ಸಂರಕ್ಷಣೆಗೆ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಗೆ ರೂ. 25.00 ಕೋಟಿ ಬಿಡುಗಡೆ ಮಾಡಲು ಆದೇಶಿಸಲಾಗಿದೆ. ಪ್ರಯುಕ್ತ, ಮಾನ್ಯ ಮುಖ್ಯಮಂತ್ರಿ ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆಯಡಿ ಬಿಡುಗಡೆಯಾದ ಅನುದಾನದಲ್ಲಿ **ರೂ. 25.00 ಕೋಟಿ** (ರೂ. ಇಪ್ಪತ್ತೈದು ಕೋಟಿಗಳು ಮಾತ್ರ)ಗಳನ್ನು **ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ರವರಿಗೆ** ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ಅನುದಾನ ಬಿಡುಗಡೆ ಮಾಡಿದೆ.

ನಿಬಂಧನೆಗಳು:-

1) ಈ ಆದೇಶದಲ್ಲಿ ಬಿಡುಗಡೆ ಮಾಡಲಾದ ಅನುದಾನವನ್ನು ಯಾವ ಉದ್ದೇಶಕ್ಕೆ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಮಾತ್ರ ಬಳಸಿಕೊಳ್ಳತಕ್ಕದ್ದು, ಯಾವುದೇ ಕಾರಣಕ್ಕೂ ಅನುದಾನವನ್ನು ಮಾರ್ಗಪಲ್ಲಟ ಮಾಡುವಂತಿಲ್ಲ.
2) ಬಿಡುಗಡೆ ಮಾಡಿರುವ ಅನುದಾನಕ್ಕೆ ಉಪಯೋಗಿತ ಪ್ರಮಾಣ ಪತ್ರವನ್ನು ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯಕ್ಕೆ ಕಳುಹಿಸತಕ್ಕದ್ದು.
3) ಈಗ ಬಿಡುಗಡೆ ಮಾಡಿರುವ ಅನುದಾನವನ್ನು ದಿನಾಂಕ: 31.03.2017 ರೊಳಗೆ ವೆಚ್ಚ ಮಾಡತಕ್ಕದ್ದು.
4) **ವಕ್ಫ್ ಆಸ್ತಿಗಳ ಸಂರಕ್ಷಣೆ ಕಾರ್ಯಕ್ರಮವನ್ನು ನಿಯಮಾನುಸಾರ ಹಮ್ಮಿಕೊಳ್ಳಲು ಸರ್ಕಾರದಿಂದ ಸೂಕ್ತ ಅನುಮೋದನೆ ಪಡೆಯತಕ್ಕದ್ದು.**

ಇದಕ್ಕೆ ತಗಲುವ ವೆಚ್ಚವನ್ನು ಆಬ್ಜೆಕ್ಟ್ ಕೋಡ್ (386) ಲೆಕ್ಕಶೀರ್ಷಿಕೆ 4225-03-277-2-10 ಮಾನ್ಯ ಮುಖ್ಯಮಂತ್ರಿಗಳ ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆ, ರಾಜ್ಯವಲಯ ಯೋಜನೆಯಡಿ 2016-17ನೇ ಸಾಲಿನಲ್ಲಿ ಒದಗಿಸಿರುವ ಆಯವಯ್ಯದಲ್ಲಿ ಭರಿಸುವುದು.

**(ಅಕ್ರಂ ಪಾಷ)**
**ನಿರ್ದೇಶಕರು**
**ಅಲ್ಪಸಂಖ್ಯಾತರ ನಿರ್ದೇಶನಾಲಯ,**
**ಬೆಂಗಳೂರು**

ಪ್ರತಿಯನ್ನು:-

1. ಕರ್ನಾಟಕ ಮಹಾಲೇಖಪಾಲರು, ಬೆಂಗಳೂರು
2. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ಬೆಂಗಳೂರು.
3. ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವೆಚ್ಚ-3, ಬೆಂಗಳೂರು
4. ಉಪ ನಿರ್ದೇಶಕರು, ಖಜಾನೆ ಗಣಕೀಕರಣ ನೆಟ್‌ವರ್ಕ್ ವಿಭಾಗ, ಖನಿಜ ಭವನ, ಬೆಂಗಳೂರು ರವರಿಗೆ ಗಣಕಿಕರಿಸಲು ಕೋರಿದೆ.
5. ಜಂಟಿ ನಿರ್ದೇಶಕರು, ಬೆಂಗಳೂರು ನಗರ ಜಿಲ್ಲಾ ಖಜಾನೆ, ಕಂದಾಯ ಭವನ, ಬೆಂಗಳೂರು.
6. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ಕನ್ನಿಂಗಮ್ ರೋಡ್, ಬೆಂಗಳೂರು-52.
7. ಲೆಕ್ಕಪತ್ರ ಶಾಖೆ.
8. ಕಛೇರಿ ಪ್ರತಿ.
9. ಹೆಚ್ಚುವರಿ ಪ್ರತಿ.